# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 2072 |
| ಸದಸ್ಯರ ಹೆಸರು | : | ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.03.2022 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಂಗಭದ್ರ ಅಣೆಕಟ್ಟೆಯಲ್ಲಿ ಹೂಳು ತುಂಬಿರುವ ಹಿನ್ನೆಲೆಯಲ್ಲಿ ನೂರಾರು ಟಿಎಂಸಿ ನೀರನ್ನು ಮಳೆಗಾಲದ ಸಮಯದಲ್ಲಿ ಸಂಗ್ರಹಿಸಲು ಅನುಕೂಲವಾಗುವಂತೆ ನವಿಲೆ ಸಮೀಪ ಸಮತೋಲನ ಅಣೆಕಟ್ಟೆ ನಿರ್ಮಿಸುವ ಬಗ್ಗೆ ಡಿಪಿಆರ್ ಸಿದ್ದಪಡಿಸಲಾಗಿದೆಯೇ; | ತುಂಗಭದ್ರಾ ಜಲಾಶಯದ ಸಂಗ್ರಹಣಾ ಸಾಮರ್ಥ್ಯದ ಸಮಸ್ಯೆ ನೀಗಿಸಲು ಪರ್ಯಾಯ ಮಾರ್ಗೋಪಾಯವಾಗಿ, ನವಲಿ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಕಾಮಗಾರಿಯ ಯೋಜನಾ ವರದಿಯನ್ನು ತಯಾರಿಸುವ ಕನ್ಸಲ್ಟೆನ್ಸಿ ಅಂದಾಜು ಪಟ್ಟಿ ರೂ. 14.30 ಕೋಟಿ ಮೊತ್ತದ ಅಂದಾಜಿಗೆ ದಿನಾಂಕ:16.05.2020 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಯೋಜನೆಯ ವಿವರವಾದ ವರದಿಯನ್ನು ತಯಾರಿಸಲು ಸರ್ವೆ ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಆ) | ಡಿಪಿಆರ್ ಸಿದ್ದಪಡಿಸಿದ್ದಲ್ಲಿ, ಈ ಯೋಜನೆಯ ಆಗುಹೋಗುಗಳ ಬಗ್ಗೆ ಮೊದಲಿಗೆ ಕಾಡಾ ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲು ಕ್ರಮ ಕೈಗೊಳ್ಳಲಾಗುವುದೇ; | ಯೋಜನೆಯ ವಿವರವಾದ ಯೋಜನಾ ವರದಿ ಸ್ವೀಕೃತವಾದ ನಂತರ ಅದರ ತಾಂತ್ರಿಕ ಶಕ್ಯತೆ ಮತ್ತು ಇತರೆ ಕಾರ್ಯ ಸಾಧ್ಯತೆಗಳ ಬಗ್ಗೆ ಸಂಬಂಧಪಟ್ಟವರೊಂದಿಗೆ ಚರ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು. |
| ಇ) | ನಿರ್ಣಯದ ಸಂಬಂಧ ಆಂಧ್ರಪ್ರದೇಶದೊಂದಿಗೆ ಸರ್ಕಾರ ಮಾತುಕತೆ ನಡೆಸಿ ಯೋಜನೆಯನ್ನು ಅನುಷ್ಠಾನಗೊಳಿಸುವುದೇ? | ಮುಂದುವರೆದು, ಸದರಿ ಯೋಜನೆಯ ಬಗ್ಗೆ ತೆಲಂಗಾಣ ಹಾಗೂ ಆಂಧ್ರಪ್ರದೇಶ ರಾಜ್ಯಗಳೊಂದಿಗೆ ಸಮಾಲೋಚಿಸಿ ಅವರುಗಳ ಸಹಕಾರದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಜಸಂಇ 86 ಎಂಎಲ್‌ಎ 2022

(ಗೋವಿಂದ ಎಂ.ಕಾರಜೋಳ)
ಜಲಸಂಪನ್ಮೂಲ ಸಚಿವರು